**ಸಾಕ್ಷಿಯನ್ನು ದಿಃ 18.11.2019 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯವಿಚಾರಣೆಃ ವಾದಿ ಪರ ಶ್ರೀ ಎ.ಎಂ.ಆರ್ ವಕೀಲರಿಂದಃ**

ಈಗ ನಾನು ನನ್ನ ಮುಖ್ಯವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ನ್ಯಾಯಾಲಯಕ್ಕೆ ಸಲ್ಲಿಸುತ್ತಿದ್ದೇನೆ. ಹಾಗೂ ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನಗೆ ತಿಳಿದಿರುತ್ತವೆ ಮತ್ತು ಸಂಗತಿಗಳು ಸತ್ಯವಾಗಿರುತ್ತವೆ ಮತ್ತು ನಾನು ಅದಕ್ಕೆ ಸಹಿಯನ್ನು ಹಾಕಿರುತ್ತೇನೆ.

ನಮ್ಮ ಕುಟುಂಬಕ್ಕೆ ಸಂಬಂಧಪಟ್ಟಂತೆ ವಂಶವೃಕ್ಷದ ಪ್ರಮಾಣಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ದಾವಾ ಆಸ್ತಿಯನ್ನು ನನ್ನ ತಂದೆ ಹಾಗೂ ಪ್ರತಿವಾದಿಯರ ತಂದೆ ಒಟ್ಟಾಗಿ ಖರೀದಿ ಮಾಡಿದ ಬಗ್ಗೆ ಜಂಟಿ ಖರೀದಿ ಕಾಗದ ಪತ್ರದ ಅಸಲು ಪ್ರತಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಸದರಿ ನಿಪಿ-2 ಕ್ಕೆ ಸಂಬಂಧಪಟ್ಟಂತೆ ಕ್ರಯಪತ್ರ ಓದಲು ಸರಿಯಾಗಿ ಕಾಣದೆ ಇದ್ದ ಕಾರಣ ಅದರ ದೃಢೀಕೃತ ಪ್ರತಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಪಿ-2(ಎ) ಎಂದು ಗುರ್ತಿಸಲಾಯಿತು. ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಎಂಆರ್ ನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ದಾವಾ ಆಸ್ತಿಗೆ ಸಂಬಂಧಪಟ್ಟಂತೆ 1 ಪಹಣಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಪಟ್ಟಾಪುಸ್ತಕವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು ಗುರ್ತಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ.)

ಓ ಹೇ ಕೇ ಸರಿ ಇದೆ.

**(ಎ.ಸಿ. ದಯಾನಂದ ಮೂರ್ತಿ)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,**
**ಬಂಗಾರಪೇಟೆ**